## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಡಾ: ಉಮಾಶ್ರೀ (ನಾಮನಿರ್ದೇಶಿತರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1741 (1977) |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 24-03-2026 |

*****

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಉತ್ಪಾದನೆಯಾಗುವ ರೇಷ್ಮೆ ಸೀರೆಗಳನ್ನು ಹೊರ ರಾಜ್ಯದವರು ಕಡಿಮೆ ಬೆಲೆಗೆ ಖರೀದಿಸಿ ಅವರದ್ದೇ ಬ್ರಾಂಡ್ ಸೃಷ್ಟಿ ಮಾಡಿ ಮತ್ತೆ ಕರ್ನಾಟಕ ರಾಜ್ಯದಲ್ಲೇ ಅಧಿಕ ಬೆಲೆಗೆ ಮಾರಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ಯೋಜನೆ ರೀತಿ ಕ್ರಮಕೈಗೊಂಡಿದೆ; | ರಾಜ್ಯದಲ್ಲಿ ಉತ್ಪಾದನೆಯಾಗುವ ರೇಷ್ಮೆ ಸೀರೆಗಳನ್ನು ಹೊರ ರಾಜ್ಯದವರು ಕಡಿಮೆ ಬೆಲೆಗೆ ಖರೀದಿಸಿ ಅವರದ್ದೇ ಬ್ರಾಂಡ್ ಸೃಷ್ಟಿ ಮಾಡಿ ಮತ್ತೆ ಕರ್ನಾಟಕ ರಾಜ್ಯದಲ್ಲೇ ಅಧಿಕ ಬೆಲೆಗೆ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |
| (ಆ) | ರಾಜ್ಯದಲ್ಲಿ ಅತೀ ಹೆಚ್ಚು ಕೈಮಗ್ಗ ಉತ್ಪನ್ನಗಳ ತಯಾರಿಕೆ ಪ್ರದೇಶ (ಇಳಕಲ್, ರಬಕವಿ-ಬನಹಟ್ಟಿ, ದೊಡ್ಡಬಳ್ಳಾಪುರ) ಗಳಲ್ಲಿ ನೇಕಾರರೇ ನೇರವಾಗಿ ತಮ್ಮ ಉತ್ಪನ್ನಗಳನ್ನು ಮಾರಾಟ ಮಾಡಲು ಸರ್ಕಾರ ಸೂಕ್ತವಾದ ಮಾರುಕಟ್ಟೆ ವ್ಯವಸ್ಥೆಯನ್ನು ಕಲ್ಪಿಸುವ ಬಗ್ಗೆ ಚಿಂತಿಸಿದೆಯೇ; ಹಾಗಿದ್ದಲ್ಲಿ, ಸರ್ಕಾರ ಯಾವ ರೀತಿ ಕ್ರಮ ಕೈಗೊಂಡಿದೆ? | ಕೈಮಗ್ಗ ಉತ್ಪನ್ನಗಳಿಗೆ ಮಾರುಕಟ್ಟೆ ವ್ಯವಸ್ಥೆಯನ್ನು ಕಲ್ಪಿಸಲು ಸರ್ಕಾರವು ಈ ಕೆಳಕಂಡಂತೆ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.<br><br>• ರಾಜ್ಯ ಸರ್ಕಾರದ ವತಿಯಿಂದ ಕೈಮಗ್ಗ ನೇಕಾರರ ಸಹಕಾರ ಸಂಘಗಳು ಹಾಗೂ ಕೈಮಗ್ಗ ಮಹಾಮಂಡಳಗಳು / ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದಲ್ಲಿ ತಯಾರಿಸಲಾದ ಕೈಮಗ್ಗ ಉತ್ಪನ್ನಗಳಿಗೆ ವರ್ಷದಲ್ಲಿ 365 ದಿನಗಳ ಅವಧಿಗೆ ಮಾರಾಟ ಮಾಡಿದ ಕೈಮಗ್ಗ ಉತ್ಪನ್ನಗಳ ಮೌಲ್ಯದ ಮೇಲೆ ಶೇಕಡ 20ರಷ್ಟು ರಿಬೇಟ್ ಮಾರುಕಟ್ಟೆ ಪ್ರೋತ್ಸಾಹಧನವನ್ನು ನೀಡಲಾಗುತ್ತಿದೆ.<br><br>• ಕೇಂದ್ರ ಸರ್ಕಾರದ ರಾಷ್ಟ್ರೀಯ ಕೈಮಗ್ಗ ಅಭಿವೃದ್ಧಿ ಕಾರ್ಯಕ್ರಮ (National Handloom Development Programme-NHDP) ದಡಿ ರಾಷ್ಟ್ರೀಯ ಕೈಮಗ್ಗ ಮೇಳ (National Handloom Expo - NHE), ರಾಜ್ಯ ಮಟ್ಟದ ಕೈಮಗ್ಗ ಮೇಳ |

...2

| | | |
|---|---|---|
| | | (State Handloom Expo - SHE) ಹಾಗೂ ಜಿಲ್ಲಾ ಮಟ್ಟದ ಕೈಮಗ್ಗ ಮೇಳ (District Handloom Expo-DHE) ಗಳನ್ನು ಆಯೋಜಿಸಿ ಕೈಮಗ್ಗ ಉತ್ಪನ್ನಗಳಿಗೆ ಮಾರುಕಟ್ಟೆ ಸೌಲಭ್ಯವನ್ನು ಕಲ್ಪಿಸಲಾಗುತ್ತಿದೆ.<br>• ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ವತಿಯಿಂದ ಕೈಮಗ್ಗ ನೇಕಾರರಿಗೆ ಉತ್ಕೃಷ್ಟ ಗುಣಮಟ್ಟದ ರೇಷ್ಮೆ ಹಾಗೂ ಹತ್ತಿ ನೂಲನ್ನು ಸರಬರಾಜು ಮಾಡಿ, ಉತ್ಪಾದಿಸಲಾದ ಸಾಂಪ್ರದಾಯಿಕ ರೇಷ್ಮೆ ಸೀರೆ, ಉಡುಪಿ ಸೀರೆ, ಇಳಕಲ್ ಸೀರೆ ಹಾಗೂ ಇತರೆ ಕೈಮಗ್ಗ ಉತ್ಪನ್ನಗಳನ್ನು ನಿಗಮದ ವತಿಯಿಂದ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸ್ಥಾಪಿಸಲಾಗಿರುವ ಪ್ರಿಯದರ್ಶಿನಿ ಮಾರಾಟ ಮಳಿಗೆಗಳ ಮೂಲಕ ಮಾರಾಟ ಮಾಡಲಾಗುತ್ತಿದೆ.<br>• ಕೆ.ಹೆಚ್.ಡಿ.ಸಿ. ನಿಗಮದ ಕೈಮಗ್ಗ ಉತ್ಪನ್ನಗಳನ್ನು ಇ-ಕಾಮರ್ಸ್ ವೇದಿಕೆ ಮುಖಾಂತರ ಮಾರಾಟ ಮಾಡುವುದರ ಮೂಲಕ ಕೆ.ಹೆಚ್.ಡಿ.ಸಿ. ನಿಗಮ ತನ್ನ ಸಂಪನ್ಮೂಲವನ್ನು ಹೆಚ್ಚಿಸಿಕೊಳ್ಳುವ ಯೋಜನೆ ಹಮ್ಮಿಕೊಂಡಿರುತ್ತದೆ. ಈ ನಿಟ್ಟಿನಲ್ಲಿ ಪ್ರಸ್ತುತ ಪ್ರಾಯೋಗಿಕವಾಗಿ ನೇಕಾರರ ಭವನದಲ್ಲಿರುವ ಪ್ರಿಯದರ್ಶಿನಿ ಮಾರಾಟ ಮಳಿಗೆಯಲ್ಲಿ ಇ-ಕಾಮರ್ಸ್ ವೇದಿಕೆಯನ್ನು ಪ್ರಾರಂಭ ಮಾಡಲಾಗಿದ್ದು, ಗ್ರಾಹಕರಿಂದ ಉತ್ತಮ ಪ್ರತಿಕ್ರಿಯೆ ಬರುತ್ತಿದೆ.<br>• ಬೆಂಗಳೂರು ಅಂತರಾಷ್ಟ್ರೀಯ ನಿಲ್ದಾಣದ ಆವರಣದಲ್ಲಿ "ಕಲಾಲೋಕ" ಕೈಮಗ್ಗ ಮಾರಾಟ ಮಳಿಗೆಯನ್ನು ಸ್ಥಾಪಿಸಲಾಗಿದೆ. ಸದರಿ ಕಲಾಲೋಕ ಕೈಮಗ್ಗ ಮಾರಾಟ ಮಳಿಗೆಯ ಮುಖಾಂತರ ರಾಜ್ಯದ ಕೈಮಗ್ಗ ಉತ್ಪನ್ನಗಳನ್ನು ಹಾಗೂ ವಿಶ್ವವಿಖ್ಯಾತ ಸಾಂಪ್ರದಾಯಿಕ ಸೀರೆಗಳ ಮಾರಾಟಕ್ಕೆ ಸೌಲಭ್ಯ ಕಲ್ಪಿಸಲಾಗಿದೆ. |

ಸಂಖ್ಯೆ: CI 88 JAKE 2026

(ಶಿವಾನಂದ ಎಸ್. ಪಾಟೀಲ)

ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು